# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 344(2438)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು

ವಿಷಯ : ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಬಗ್ಗೆ

(ಅ) ರಾಜ್ಯದಲ್ಲಿನ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ದೇಶದ ಕೈಗಾರಿಕೆಯ ಬೆನ್ನೆಲುಬು ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ದೇಶದ ಒಟ್ಟು ಅಭಿವೃದ್ಧಿ ಉತ್ಪನ್ನಗಳ (GDP) ಪೈಕಿ ಶೇ. 30 ರಷ್ಟು ಈ ವಲಯದಿಂದ ಬರುತ್ತಿರುವುದು ನಿಜವೇ;

(ಆ) ರಾಜ್ಯದಲ್ಲಿರುವ ಇಂತಹ ಕೈಗಾರಿಕೆಗಳನ್ನು ಕೈಗಾರಿಕಾ ಅಭಿವೃದ್ಧಿ ಪ್ರದೇಶದಲ್ಲಿ ಹೆಚ್ಚು ಹೆಚ್ಚು ಸ್ಥಾಪಿಸಿ ಈ ಪ್ರದೇಶದ ಸುತ್ತಮುತ್ತಲಿನ ಜನತೆಗೆ ಉದ್ಯೋಗ ಕಲ್ಪಿಸಲು ರಾಜ್ಯ ಸರ್ಕಾರ ರೂಪಿಸಿರುವ ಉತ್ತೇಜನ ಪೂರಕವಾದ ಸಣ್ಣ ಕೈಗಾರಿಕಾ ನೀತಿಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಈ ಕ್ಷೇತ್ರದಲ್ಲಿ ಗ್ರಾಮಾಂತರ ಮತ್ತು ಹಳ್ಳಿಗಾಡಿನಿಂದ ಬಂದಿರುವ ಕೌಶಲ್ಯರಹಿತ ಮತ್ತು ಅರೆ-ನುರಿತ ಉದ್ಯೋಗಿಗಳಿಗೆ ತರಬೇತಿ ನೀಡಲು ಪ್ರತಿಯೊಂದು ಕೈಗಾರಿಕಾ ಅಭಿವೃದ್ಧಿ ವಲಯದಲ್ಲಿ Skill Development Institute ತೆರೆಯಲು ಯೋಜನೆ ರೂಪಿಸಿದೆಯೇ; ಇಲ್ಲದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?